ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಬಂದಿದೆ.

ಆ) ಯೋಜನೆಯಲ್ಲಿ ಲಭ್ಯವಾಗುವ ಹಣದ ಮಿತಿಯಲ್ಲಿ ಪರಿಶೀಲಿಸಲಾಗುವುದು.

ಕನ್ನಡ ಗ್ರಂಥಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

೩೫ (೧೬೮) ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಆಥಣಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಕನ್ನಡದಲ್ಲಿ ಪ್ರಕಟವಾಗುವ ಗ್ರಂಥಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ೫೦೦ ಗ್ರಂಥಗಳನ್ನು ಕೊಳ್ಳಲು ಸರ್ಕಾರದವರು ನಿರ್ಧರಿಸಿದ್ದಾರೆಯೇ ?

ಆ) ಹಾಗಿದ್ದಲ್ಲಿ ಈ ನಿರ್ಧಾರ ಎಂದಿನಿಂದ ಜಾರಿಗೆ ಬರುತ್ತದೆ ?

ಇ) ಈ ಕೊಳ್ಳುವಿಕೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಯ ಬರಹಗಾರರ ಪ್ರಾತಿನಿಧ್ಯ ಪುಸ್ತಕ ಕೊಳ್ಳುವ ಬಗ್ಗೆ ನೀತಿಯೊಂದನ್ನು ರೂಪಿಸಲಾಗುವುದೇ ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಕನ್ನಡ ಸಾಹಿತ್ಯ ಅಕಾಡಮಿಯ ಬಹುಮಾನಿತ ಎಲ್ಲಾ ಪುಸ್ತಕಗಳನ್ನು ಮತ್ತು ನ್ಯಾಷನಲ್ ಬುಕ್ ಟ್ರಸ್ಟ್‌ರವರಿಂದ ಪ್ರಕಟಗೊಳ್ಳುವ ಎಲ್ಲಾ ಪುಸ್ತಕಗಳನ್ನು ಕೊಂಡುಕೊಳ್ಳಲು ಆದೇಶಗಳಿವೆ.

ರಾಜ್ಯದಲ್ಲಿ ಪ್ರಾರಂಭವಾಗಿರುವ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಬಗ್ಗೆ

೩೭ (೬೫) ಶ್ರೀ ಕೆ. ಹೆಚ್. ಪಾಟೀಲ್ (ಗದಗ್).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಕಳೆದ ಎರಡು ವರ್ಷಗಳಿಂದ ಸರ್ಕಾರದಿಂದ ಮಂಜೂರಾದ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಸಂಖ್ಯೆ ಎಷ್ಟು ?

ಆ) ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಭಿನ್ನಭಿನ್ನವಾದ ಪಠ್ಯ ಕ್ರಮವನ್ನು ಅಳವಡಿಸಿರುವುದು ನಿಜವೇ ?

ಇ) ಹಾಗಿದ್ದರೆ ಭೇದಭಾವ ಯಾಕೆ ?

ಈ) ಪರಿಷ್ಕೃತ ಪಠ್ಯಕ್ರಮ ಜಾರಿಗೊಳಿಸಲು ತಗಲುವ ಖರ್ಚು ಎಷ್ಟು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಸರ್ಕಾರದಿಂದ ಕಳೆದ ಎರಡು ವರ್ಷಗಳಲ್ಲಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳು ಪ್ರಾರಂಭಿಸಲು ಅನುಮತಿ ನೀಡಲಾದ ಸಂಖ್ಯೆ ಅನುಕ್ರಮವಾಗಿ ೬ ಮತ್ತು ೬೨ ಇವೆ.

ಆ) ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್‌ನಲ್ಲಿ ಪಠ್ಯಕ್ರಮವನ್ನು ಪರಿಷ್ಕೃತ ಮಾಡಲಾಗಿದೆ. ಈ ಪರಿಷ್ಕೃತ ಪಠ್ಯಕ್ರಮವನ್ನು ೧೯೮೪–೮೫ನೇ ಸಾಲಿನಿಂದ ಬೆಂಗಳೂರಿನ ಎಸ್.ಜೆ. (ಸರ್ಕಾರಿ) ಪಾಲಿಟೆಕ್ನಿಕ್‌ನಲ್ಲಿ ಅಳವಡಿಸಲಾಗಿದೆ. ಮತ್ತು ೧೯೮೫–೮೬ನೇ ಸಾಲಿನಿಂದ ಈ ಪರಿಷ್ಕೃತ ಪಠ್ಯಕ್ರಮವನ್ನು ನಾಲ್ಕು ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಜಾರಿಗೊಳಿಸಲು ಸರ್ಕಾರ ಈಗಾಗಲೇ ಮಂಜೂರಾತಿ ನೀಡಿದೆ. ಉಳಿದ ಸರ್ಕಾರಿ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪರಿಷ್ಕೃತ ಪಠ್ಯಕ್ರಮ ಹಣಕಾಸಿನ ಪರಿಸ್ಥಿತಿಯನ್ನು ಗಮನಿಸಿ ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಖಾಸಗಿ ವಲಯದಲ್ಲಿ ಪ್ರಾರಂಭಿಸಲಾದ ಪಾಲಿಟೆಕ್ನಿಕ್‌ಗಳಿಗೆ ಹೊಸ ಪಠ್ಯಕ್ರಮವನ್ನು ಜಾರಿಗೊಳಿಸ ಬೇಕೆಂದು ತಿಳಿಸಲಾಗಿದೆ. ಏಕೆಂದರೆ ಈ ಪಾಲಿಟೆಕ್ನಿಕ್‌ಗಳು ಇತ್ತೀಚೆಗೆ ಪ್ರಾರಂಭಿಸಲಾಗುವುದರಿಂದ ಅವರಿಗೆ ಪರಿಷ್ಕೃತ ಪಠ್ಯಕ್ರಮ ಪ್ರಕಾರ ಕಾರ್ಯಗಾರ ಮತ್ತು ಪ್ರಯೋಗಾಲಯ ಸುಸಜ್ಜಗೊಳಿಸಲು ಅನುಕೂಲವಾಗುತ್ತದೆ. ಇಲ್ಲವಾದರೆ ಹಳೆಯ ಪಠ್ಯಕ್ರಮ ಪ್ರಕಾರ ಖರೀದಿಸಲಾದ ಉಪಕರಣಗಳು ಕೆಲಸಕ್ಕೆ ಬಾರದೆ ಹೋಗುತ್ತವೆ. ಒಂದೊಂದು ಪಾಲಿಟೆಕ್ನಿಕ್‌ನಲ್ಲೂ ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯದಲ್ಲಿ ಹೊಸ ಪಠ್ಯಕ್ರಮ ಜಾರಿಗೊಳಿಸಲು ತಗಲುವ ಖರ್ಚು ಅನುಕ್ರಮವಾಗಿ ಅನಾವರ್ತ ರೂ. ೬೫.೦೦ ಲಕ್ಷ ಆವರ್ತದಲ್ಲಿ ರೂ. ೪.೫೦ ಲಕ್ಷ ಪ್ರತಿ ವರ್ಷ.

(ಇ) (ಅ)ನಲ್ಲಿ ನಮೂದಿಸಿರುವಂತೆ ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಹೊಸ ಪಠ್ಯಕ್ರಮವನ್ನು ಜಾರಿ ಗೊಳಿಸಲು ಅನುಕೂಲವಾಗುತ್ತದೆ. ಹಾಗೂ ಹೊಸ ಪಠ್ಯಕ್ರಮವನ್ನು ಪರಿಷ್ಕರಿಸುವಾಗ ಟಿ.ಟಿ.ಟಿ.ಐ. ಮದ್ರಾಸು ಮತ್ತು ಕೈಗಾರಿಕೆಗಳ ತಜ್ಞರನ್ನು ಸಮಾಲೋಚಿಸಿ ಹೊಸ ತಾಂತ್ರಿಕ ವಿಷಯಗಳನ್ನು ಅಳವಡಿಸಿ ವೈಜ್ಞಾನಿಕವಾಗಿ ರೂಪಿಸುವುದರಿಂದ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಹೊಸ ಪಠ್ಯಕ್ರಮ ಅಳವಡಿಸಿ ಕೊಳ್ಳುವುದು ಆಪರ ದೃಷ್ಟಿಯಿಂದಲೇ ಒಳ್ಳೆಯದು.

(ಈ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ (ಅನುದಾನಿತ) ಪಾಲಿಟೆಕ್ನಿಕ್‌ಗಳಲ್ಲಿ ಸಿವಿಲ್ ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಗಳಲ್ಲಿ ಪರಿಷ್ಕೃತ ಪಠ್ಯಕ್ರಮ ಜಾರಿ ಗೊಳಿಸಲು ತಗಲುವ ಖರ್ಚು ಅನುಕ್ರಮವಾಗಿ ಅನಾವರ್ತ ರೂ. ೩,೬೭೦ ಲಕ್ಷ ಮತ್ತು ಪ್ರತಿವರ್ಷ ಆವರ್ತ ರೂ. ೨೬೦ ಲಕ್ಷ.

ಎಣ್ಣೆಕಾಳು ಮತ್ತು ದ್ವಿದಳಧಾನ್ಯ ಅಭಿವೃದ್ಧಿ ಯೋಜನೆಗಳ ಬಗ್ಗೆ

೩೮ (೬೩) ಶ್ರೀ ಕೆ.ಹೆಚ್. ಪಾಟೀಲ್ (ಗದಗ).—ಮಾನ್ಯ ಕೃಷಿ ಮತ್ತು ತೋಟಗಾರಿಕೆ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಭಾರತ ಸರ್ಕಾರವು ನೆರವು ನೀಡುತ್ತಿರುವ ಎಣ್ಣೆಕಾಳು ಮತ್ತು ದ್ವಿದಳ ಧಾನ್ಯ ಅಭಿವೃದ್ಧಿ ಯೋಜನೆಗಳನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲಾಗುತ್ತಿದೆಯೇ?

ಆ) ಸಂಶೋಧನಾ ಅಭಿವೃದ್ಧಿ, ಬೀಜ ಸಂಗ್ರಹಣೆ ಮತ್ತು ವಿತರಣೆ ಇತ್ಯಾದಿಗಳ ಜಿಲ್ಲಾವಾರು ಅಂಕಿ ಅಂಶಗಳನ್ನು ಕೊಡುವುದು?

ಇ) ಈ ಯೋಜನೆಗಳಿಗೆ ಪ್ರಸ್ತುತ ವರ್ಷದಲ್ಲಿ ಆಗುವ ಅಂದಾಜು ಖರ್ಚು ಎಷ್ಟು ?

ಶ್ರೀ ಬಸವರಾಜ್ ಪಾಟೀಲ್ ಅನ್ವರಿ (ಕೃಷಿ ಮತ್ತು ತೋಟಗಾರಿಕೆ ರಾಜ್ಯ ಸಚಿವರು).—

ಅ) ಹೌದು.

ಆ) ಭಾರತ ಸರ್ಕಾರದ ನೆರವಿನಿಂದ ಕಾರ್ಯಗತಗೊಳಿಸಲಾಗುತ್ತಿರುವ ಎಣ್ಣೆಕಾಳು ಮತ್ತು ದ್ವಿದಳ ಧಾನ್ಯಗಳ ಅಭಿವೃದ್ಧಿ ಯೋಜನೆಗಳಡಿಯಲ್ಲಿ ಸಂಶೋಧನಾ ಕಾರ್ಯಕ್ರಮಗಳಿರುವುದಿಲ್ಲ. ಬೀಜ ಸಂಗ್ರಹಣೆ ಮತ್ತು ವಿತರಣೆಯ ಜಿಲ್ಲಾವಾರು ಅಂಕಿ ಅಂಶಗಳನ್ನು ಲಗತ್ತಿಸಲಾಗಿದೆ.

ಇ) ಅಂದಾಜು ಖರ್ಚು ವಿವರ ಈ ರೀತಿ ಇದೆ.

(ಲಕ್ಷ ರೂ ಗಳಲ್ಲಿ)

ರಾಷ್ಟ್ರೀಯ ಎಣ್ಣೆಕಾಳು ಅಭಿವೃದ್ಧಿ ಯೋಜನೆ.	೨೪೦.೦೦
ರಾಷ್ಟ್ರೀಯ ದ್ವಿದಳ ಧಾನ್ಯ ಅಭಿವೃದ್ಧಿ ಯೋಜನೆ.	೪೭.೫೫